

**ಬೆಂಗಳೂರು, ಜೂ.21**– ಅಂತಾರಾಷ್ಟ್ರೀಯ 10ನೇ ಯೋಗ ದಿನಾಚರಣೆಯ ಅಂಗವಾಗಿ ವಿಧಾನಸೌಧದ ಪೂರ್ವ ದ್ವಾರದಲ್ಲಿ ಆಯೋಜಿಸಲಾಗಿದ್ದ ಯೋಗಾಭ್ಯಾಸದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಲ್ಹೋಟ್ ಭಾಗವಹಿಸಿದ್ದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ವಿಧಾನ ಪರಿಷತ್ ಸದಸ್ಯ ಟಿ.ಎ.ಶರವಣ, ನಟ ಶರಣ್, ನಟಿ ಅನುಪ್ರಭಾಕರ್, ಕ್ರಿಕೆಟರ್ ಮನೀಷ್ ಪಾಂಡೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಿ.ಕೆ. ಶಿವಕುಮಾರ್ ಮಾತನಾಡಿ, ಐದು ಸಾವಿರ ವರ್ಷಗಳ ಇತಿಹಾಸ ಇರುವ ಯೋಗವನ್ನು ಇಡೀ ವಿಶ್ವವೇ ಒಪ್ಪಿಕೊಂಡಿದೆ. ನಮ ಧರ್ಮ, ಸಂಸ್ಕೃತಿ, ಪದ್ಧತಿಗೆ ಜಾಗತಿಕ ಮಾನ್ಯತೆ ದೊರೆತಿದೆ. ಹಿರಿಯರು ಮಹಾ ಋಷಿಗಳು ಯೋಗಕ್ಕೆ ಬುನಾದಿ ಹಾಕಿಕೊಟ್ಟಿದ್ದಾರೆ. ಜಾತಿ ಧರ್ಮ, ಪ್ರದೇಶ ಮೀರಿ ಇಂದು ಯೋಗ ಬೆಳೆಯುತ್ತಿದೆ ಎಂದರು.